ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
<u>ಕಂಪನಿಯ ಅಧಿಕೃತ ಕಚೇರಿ:</u> ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ: ಕವಿಪ್ರನಿನಿ/ಬಿ16/3442/2008-09

ದಿನಾಂಕ: 23 AUG 2018

## ಸುತ್ತೋಲೆ

ವಿಷಯ: ಬಾಡಿಗೆ ರಹಿತ ವಸತಿಗೃಹಗಳಲ್ಲಿ ವಾಸಿಸುತ್ತಿರುವ ನಿಗಮದ ನೌಕರರಿಗೆ ಮನೆ ಬಾಡಿಗೆ ಭತ್ಯೆಯನ್ನು ಪಾವತಿಸುವ ಕುರಿತು.

ಉಲ್ಲೇಖ:
1. ನಿಗಮದ ದಿನಾಂಕ: 18.09.1995 ರ ಪತ್ರ ಸಂಖ್ಯೆ: ಕವಿಮಂ/ಬಿ16/9759/86-87.
2. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು) ರವರ ದಿನಾಂಕ: 04.02.2016 ರ ಅಧಿಸೂಚನೆ ಸಂಖ್ಯೆ: ಆಇ 1 ಸೇನಿಸೇ 2014.

***

ನಿಗಮದ ನೌಕರರ ವೇತನ ಶ್ರೇಣಿಯನ್ನು ಪರಿಷ್ಕರಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18 ದಿನಾಂಕ: 09.03.2018 ಆದೇಶದ ಕಂಡಿಕೆ 10(ಎ) ನಲ್ಲಿ ರೂ.29,510/- ಮತ್ತು ಅದಕ್ಕಿಂತ ಕಡಿಮೆ ಮೂಲ ವೇತನ ಪಡೆಯುತ್ತಿರುವ ನೌಕರರರು ಬಾಡಿಗೆ ರಹಿತ ವಸತಿ ಗೃಹದಲ್ಲಿದ್ದಾಗ ಮನೆ ಬಾಡಿಗೆ ಭತ್ಯೆಯನ್ನು ಬೇಡಿಕೆ ಹಾಗೂ ವಸೂಲಿ ಎರಡನ್ನು ಮಾಡುವಂತಿಲ್ಲ ಎಂದು ತಿಳಿಸಲಾಗಿರುತ್ತದೆ. ಬಾಡಿಗೆ ರಹಿತ ವಸತಿ ಗೃಹದಲ್ಲಿರುವ ನೌಕರರು ಗಳಿಕೆ ರಜೆ ನಗದೀಕರಿಸಲು ರಜೆಗಳನ್ನು ಅಧ್ಯರ್ಪಿಸಿದಾಗ ನೌಕರರಿಗೆ ಮನೆ ಬಾಡಿಗೆ ಭತ್ಯೆಯನ್ನು ಪಾವತಿಸದಂತೆ ನಿಗಮದ ದಿನಾಂಕ: 18.09.1995 ರ ಪತ್ರ ಸಂಖ್ಯೆ: ಕವಿಮಂ/ಬಿ16/9759/86-87 ರ ಪತ್ರದಲ್ಲಿ ಸ್ಪಷ್ಟೀಕರಿಸಲಾಗಿರುತ್ತದೆ.

ದಿನಾಂಕ: 04.02.2016 ರ ಸರ್ಕಾರದ ಅಧಿಸೂಚನೆಯನ್ವಯ, ಬಾಡಿಗೆ ರಹಿತ ವಸತಿಗೃಹಗಳು ಹಂಚಿಕೆಯಾಗಿರುವ ನಿಗಮದ ನೌಕರರ ಪ್ರಕರಣಗಳಲ್ಲಿ ಗಳಿಕೆ ರಜೆ ನಗದೀಕರಣಕ್ಕಾಗಿ ಹಾಗೂ ಪತ್ರಾಂಕಿತ ರಜಾ ದಿನಗಳಲ್ಲಿ ಕರ್ತವ್ಯ ನಿರ್ವಹಿಸಿರುವುದಕ್ಕಾಗಿ ಪರಿಹಾರವಾಗಿ ರಜೆ ಸಂಬಳವನ್ನು ಪಾವತಿಸುವಾಗ ರಜೆ ಸಂಬಳದ ಪರಿಗಣನೆಯ ನಿಕಟಪೂರ್ವ ದಿನಾಂಕದಂದು ಅವರು ಪಡೆಯುತ್ತಿರುವ ಮೂಲವೇತನ ಮತ್ತು ಇತರೆ ಅರ್ಹ ಭತ್ಯೆಗಳೊಂದಿಗೆ ಅವರು ಕರ್ತವ್ಯ ನಿರ್ವಹಿಸುವ ಸ್ಥಳಕ್ಕೆ ಮತ್ತು ವೇತನಕ್ಕೆ ಅರ್ಹವಾಗುವ ಪ್ರಮಾಣಾನುಸಾರದ ಮನೆ ಬಾಡಿಗೆ ಭತ್ಯೆಯನ್ನು ಸಹ ಸೇರಿಸಿ ಪಾವತಿಸುವಂತೆ ಈ ಮೂಲಕ ತಿಳಿಸಲಾಗಿದೆ.

Gopal
ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

<u>ಗೆ:</u>

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಚೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ನಿರ್ದೇಶಕರು (ಹಣಕಾಸು), ಬೆಸ್ಕಾಂ, ಬೆಂಗಳೂರು.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
6. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ.

<u>www.kptcl.com/eprasarana</u> for information of:

7. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
9. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ ಬೆಂಗಳೂರು.